## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2012-13ನೇ ಸಾಲಿನಲ್ಲಿ ಗಿರಿಜನ ಉಪಯೋಜನೆಗೆ ವಿಶೇಷ ಕೇಂದ್ರಿಯ ನೆರವಿನಡಿ ಪರಿಶಿಷ್ಟ ವರ್ಗದವರ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಮಂಜೂರಾದ ಅನುದಾನ ಬಿಡುಗಡೆ ಮಾಡುವ ಬಗ್ಗೆ

ಓದಲಾಗಿದೆ: 1)ಭಾರತ ಸರ್ಕಾರದ ಪತ್ರಸಂಖ್ಯೆ:14020/4(10)/2012/ ಎಸ್‌ಜಿ-II, ದಿನಾಂಕ:31-08-2012

2)ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಪತ್ರ ಸಂಖ್ಯೆ: ಪವಕನಿ: ಗಿಉಯೋ: ಸಿಆರ್-14/12-13 ದಿನಾಂಕ:21-12-2012

*****

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ಕೇಂದ್ರ ಸರ್ಕಾರ ಪತ್ರದಲ್ಲಿ 2012-13ನೇ ಸಾಲಿನಲ್ಲಿ ಗಿರಿಜನ ಉಪಯೋಜನೆಗೆ ವಿಶೇಷ ಕೇಂದ್ರಿಯ ನೆರವಿನಡಿ ಪರಿಶಿಷ್ಟ ವರ್ಗದವರಿಗೆ ಮೂಲಭೂತ ಸೌಲಭ್ಯ ಹಾಗೂ ಆರ್ಥಿಕ ಉನ್ನತಿ ಕಾರ್ಯಕ್ರಮಗಳಿಗಾಗಿ ರೂ.24.71 ಕೋಟಿ ಅನುದಾನವನ್ನು ನಿಗದಿಪಡಿಸಿ ಮೊದಲನೇ ಕಂತಿನಲ್ಲಿ ರೂ.1853.25 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಅನುದಾನವು ರಾಜ್ಯ ಸರ್ಕಾರದ ಲೆಕ್ಕ ಶೀರ್ಷಿಕೆಗೆ ಜಮಾ ಆಗಿರುತ್ತದೆ. ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಪತ್ರದಲ್ಲಿ 2012-13ನೇ ಸಾಲಿನ ವಿಶೇಷ ಕೇಂದ್ರೀಯ ಯೋಜನೆಯಡಿ ವಿನಿಯೋಗಿಸಲು ಲೆಕ್ಕ ಶೀರ್ಷಿಕೆ:2225-225-02-794-04 ಯೋಜನೆಯಡಿ ನಿಗದಿಪಡಿಸಿರುವ ರೂ.3,000.00 ಲಕ್ಷಗಳಲ್ಲಿ ಈ ಕೆಳಕಂಡ ಕಾರ್ಯಕ್ರಮ ಅನುಷ್ಠಾನಗಳಿಗೆ ಬಿಡುಗಡೆ ಮಾಡಲು ತಡೆಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ: ಸಕಇ 10 ಪವಯೋ 2013, ಬೆಂಗಳೂರು ದಿನಾಂಕ:04-02-2013

2012-13ನೇ ಸಾಲಿನಲ್ಲಿ ಗಿರಿಜನ ಉಪಯೋಜನೆಗೆ ವಿಶೇಷ ಕೇಂದ್ರಿಯ ನೆರವಿನಡಿ ಪರಿಶಿಷ್ಟ ವರ್ಗದವರಿಗೆ ಮೂಲಭೂತ ಸೌಲಭ್ಯ ಹಾಗೂ ಆರ್ಥಿಕ ಉನ್ನತಿ ಕಾರ್ಯಕ್ರಮಗಳಿಗಾಗಿ ಮೊದಲನೇ ಕಂತಿನಲ್ಲಿ ಬಿಡುಗಡೆಯಾದ ರೂ.1853.25 ಲಕ್ಷಗಳನ್ನು ಈ ಕೆಳಕಂಡ ಕಾರ್ಯಕ್ರಮಗಳಿಗೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಕಾರ್ಯಕ್ರಮಗಳು | ಮೊತ್ತ | ಅನುಷ್ಠಾನಾಧಿಕಾರಿ |
|---|---|---|---|
| 1 | ಹೈನುಗಾರಿಕೆ ಕಾರ್ಯಕ್ರಮ | 1000.00 | ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ |
| 2 | ಸ್ವಯಂ ಉದ್ಯೋಗ ಮತ್ತು ಸ್ವ-ಸಹಾಯ ಸಂಘಗಳಿಗೆ ಆರ್ಥಿಕ ನೆರವು ಹಾಗೂ ವೃತ್ತಿ ತರಬೇತಿ ಕಾರ್ಯಕ್ರಮ | 350.25 | ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ |
| 3 | ಮೂಲ ನಿವಾಸಿ ಜನಾಂಗದವರ ಮತ್ತು ಅರಣ್ಯ ಅಂಚಿನಲ್ಲಿರುವ ಪರಿಶಿಷ್ಟ ವರ್ಗದವರ ಕಾಲೋನಿ/ಹಾಡಿಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸುವ ಕಾರ್ಯಕ್ರಮ. | 503.00 | ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು |

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಇವರು ಕ್ರಮ

ಸಂಖ್ಯೆ(1) ಮತ್ತು (2)ರಲ್ಲಿ ನಮೂದಿಸಿರುವ ಮೊತ್ತಗಳಿಗೆ ಸ್ವೀಕರ್ತನ ರಸೀದಿಯನ್ನು ಸಲ್ಲಿಸಿ, ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಇವರ ಮೇಲು ರುಜು ಪಡೆದು ಖಜಾನೆಯಿಂದ ಹಣ ಡ್ರಾ ಮಾಡತಕ್ಕದ್ದು. ಕ್ರಮ ಸಂಖ್ಯೆ (3)ರಲ್ಲಿ ನಮೂದಿಸಿರುವ ಮೊತ್ತಗಳನ್ನು ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಇವರ ಮೇಲು ರುಜು ಪಡೆದು ಖಜಾನೆಯಿಂದ ಹಣ ಡ್ರಾ ಮಾಡತಕ್ಕದ್ದು.

ಕೇಂದ್ರ ಸರ್ಕಾರ ಮಂಜೂರು ಮಾಡಿರುವ ಅನುದಾನವನ್ನು ಉದ್ಧೇಶಿತ ಯೋಜನೆಗೆ ವಿನಿಯೋಗಿಸಿ, ಹಣ ಬಳಕೆ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸುವುದು.

ಆ ಸಂಬಂಧದ ವೆಚ್ಚವನ್ನು ರಾಜ್ಯ ವಲಯ ಆಯವ್ಯಯ ಲೆಕ್ಕಶೀರ್ಷಿಕೆ 2225-02-794-0-04 (ಯೋಜನೆ) ಅಡಿ ಒದಗಿಸಿರುವ 3000.00 ಲಕ್ಷಗಳ ಮೊತ್ತದ ಅನುದಾನದಲ್ಲಿ ಭರಿಸುವುದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು ಟಿಪ್ಪಣಿ ಸಂಖ್ಯೆ: ಸಕಕಾ 441 ಆಂಆಸ 2012, ದಿನಾಂಕ:01-01-2013ರಲ್ಲಿ ನೀಡಿದ ಸಹಮತಿಯ ಮೇರೆಗೆ ಹಾಗೂ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕೃಷಿಭವನ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು,
4) ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಖನಿಜಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು
5) ಶಾಖಾ ರಕ್ಷ ಕಡತ.
6) ಹೆಚ್ಚುವರಿ ಪ್ರತಿ-03.